# ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 139 ಯುಎನ್‌ಇ 2020

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 21-03-2020

## ಸುತ್ತೋಲೆ

******

ದೇಶಾದ್ಯಂತ ಹರಡುತ್ತಿರುವ Covid – 19 ವೈರಾಣುವಿನ ಹರಡುವಿಕೆಯನ್ನು ತಡೆಗಟ್ಟಲು ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಕಾಲೇಜು ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಇಲಾಖೆ, ವಿಶ್ವವಿದ್ಯಾನಿಲಯಗಳು ಹಾಗೂ ಅವುಗಳ ಅಧೀನಕ್ಕೊಳಪಡುವ ಕಾಲೇಜು ಹಾಗೂ ಸಂಸ್ಥೆಗಳು ಈ ಕೆಳಕಂಡ ಮಾರ್ಗಸೂಚಿ ಕ್ರಮಗಳನ್ನು ಕಡ್ಡಾಯವಾಗಿ ಪಾಲಿಸಲು ಈ ಮೂಲಕ ಸೂಚಿಸಿದೆ.

1. ಪ್ರವೇಶ ಪರೀಕ್ಷೆ ಹಾಗೂ ಪರೀಕ್ಷೆಗಳನ್ನು ನಡೆಸುವ ಬಗ್ಗೆ ಪರಿಸ್ಥಿತಿಯನ್ನು ಅವಲೋಕಿಸಿ ಸೂಕ್ತ ನಿರ್ಧಾರಗಳನ್ನು ತೆಗೆದುಕೊಳ್ಳತಕ್ಕದ್ದು;
2. Electronic Messaging service ಮೂಲಕ ಜಾಗೃತಿ ಮೂಡಿಸುವ ಸುದ್ಧಿಯನ್ನು ಪ್ರಚಾರ ಮಾಡಲು ಹಿರಿಯ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವುದು.
3. ಸ್ವಯಂ ಸೇವಕರ ಗುಂಪುಗಳನ್ನು ರಚಿಸುವುದು; ಧ್ವನಿವರ್ಧಕದ ಮೂಲಕ ಅರಿವು ಮೂಡಿಸುವ ತಂಡವನ್ನು ರಚಿಸುವುದು;
4. ಹೆಚ್ಚಿನ ಸಂಖ್ಯೆಯಲ್ಲಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳನ್ನು ತುರ್ತು ಸೇವೆಗಳಿಗೆ ನಿಯೋಜಿಸತಕ್ಕದ್ದು;
5. ತುರ್ತು ಮತ್ತು ಮುಖ್ಯವಾದ ಕೆಲಸವನ್ನು ನಿರ್ವಹಿಸಲು ಅನುಕೂಲವಾಗುವಂತೆ ಆಯಾ ವಿಶ್ವವಿದ್ಯಾನಿಲಯಗಳ ಕುಲಪತಿಗಳು, ಕುಲಸಚಿವರು ಹಾಗೂ ಪಾಲಿಟೆಕ್ನಿಕ್/ಕಾಲೇಜುಗಳ ಪ್ರಾಂಶುಪಾಲರು ಪ್ರತಿ ದಿನವೂ ತಮ್ಮ ಸಂಸ್ಥೆಗಳಲ್ಲಿ ಹಾಜರಿರತಕ್ಕದ್ದು.

...2

6. Covid – 19 ವೈರಾಣು ತಡೆಗಟ್ಟುವ ಕುರಿತು ಸಮನ್ವಯ ಸಾಧಿಸಲು ತಮ್ಮ ಇಲಾಖೆ/ ವಿಶ್ವವಿದ್ಯಾಲಯ/ಸಂಸ್ಥೆಗಳ ಮಟ್ಟದಲ್ಲಿ ಒಬ್ಬ ನೋಡಲ್ ಅಧಿಕಾರಿಯನ್ನು ನೇಮಿಸತಕ್ಕದ್ದು ಮತ್ತು ಅವರ ಹೆಸರು, ವಿಳಾಸ, ಮೊಬೈಲ್ ಸಂಖ್ಯೆ ಹಾಗೂ ಇ-ಮೇಲ್ ಐಡಿಯನ್ನು ರಾಜ್ಯ ಮಟ್ಟದ ನೋಡಲ್ ಅಧಿಕಾರಿಗೆ ಕಳುಹಿಸತಕ್ಕದ್ದು;
7. ಉನ್ನತ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ, ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು ಇವರು Covid – 19 ವೈರಾಣು ತಡೆಗಟ್ಟುವ ಕುರಿತು ಅಗತ್ಯ ಕ್ರಮ ಕೈಗೊಳ್ಳಲು ಸರ್ಕಾರದ ಮಟ್ಟದಲ್ಲಿ ನೋಡಲ್ ಅಧಿಕಾರಿಯಾಗಿರುತ್ತಾರೆ. ಸದರಿಯವರು ಅಗತ್ಯವಿರುವ ಬೋಧಕ ಸಿಬ್ಬಂದಿಗಳ ಸೇವೆಯನ್ನು ಬಳಸಿಕೊಂಡು ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಇಲಾಖೆ/ವಿಶ್ವವಿದ್ಯಾನಿಲಯ/ಸಂಸ್ಥೆಗಳಿಂದ Covid – 19 ವೈರಾಣು ತಡೆಗಟ್ಟುವ ಸಲುವಾಗಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು ಹಾಗೂ ಶಿಕ್ಷಣ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕಂಡು ಬರುವ ಶಂಕಿತರ ವಿವರಗಳನ್ನು ಕ್ರೋಢೀಕರಿಸಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸತಕ್ಕದ್ದು;
8. ತಮ್ಮ ಅಧೀನಕ್ಕೊಳಪಡುವ ಕಛೇರಿ ಮತ್ತು ಸಂಸ್ಥೆಗಳ ಪ್ರವೇಶ ದ್ವಾರಗಳಲ್ಲಿ ಸಾಬೂನು ಮತ್ತು ನೀರು ಮತ್ತು Sanitiser ವ್ಯವಸ್ಥೆ ಮಾಡುವುದು;
9. ಒಬ್ಬರನ್ನೊಬ್ಬರು ಪರಸ್ಪರ ಅಂತರ ಕಾಯ್ದುಕೊಳ್ಳುವುದು;
10. ಸೂಕ್ತ ಮಾರ್ಗದರ್ಶನ/ಸಹಾಯಕ್ಕಾಗಿ ಜಿಲ್ಲಾ ನಿಯಂತ್ರಣ ಕೊಠಡಿಯ Helpline ಅಥವಾ DISHA helpline 0471-255 2056 ಅನ್ನು ಸಂಪರ್ಕಿಸಲು ಸಲಹೆ ಮಾಡುವುದು;
11. ಸಭೆ ಸೇರುವುದನ್ನು ಎಷ್ಟು ಸಾಧ್ಯವೋ ಅಷ್ಟು ತಪ್ಪಿಸಿ, ವಿಡಿಯೋ ಕಾನ್ಫರೆನ್ಸ್ ಅಥವಾ ಆನ್ ಲೈನ್ ಮೂಲಕ ವಿಷಯ ಹಂಚಿಕೆಗಳನ್ನು ಹಾಗೂ ಪ್ರಗತಿ ಪರಿಶೀಲನೆಯನ್ನು ನಡೆಸುವುದು.
12. ಅಗತ್ಯ ಸಂದರ್ಭದಲ್ಲಿ ಸ್ವಯಂ ಸೇವಕರಾಗಿ ಕರ್ತವ್ಯ ನಿರ್ವಹಿಸುವ ಅಧಿಕಾರಿಗಳ ವಿವರ (ಹೆಸರು, ವಿಳಾಸ, ಮೊಬೈಲ್ ಸಂಖ್ಯೆ ಮತ್ತು ಇ-ಮೇಲ್ ಐಡಿ)ಯನ್ನು ಸಿದ್ಧಪಡಿಸಿಕೊಳ್ಳತಕ್ಕದ್ದು;

13. ತುರ್ತು ಸಂದರ್ಭದಲ್ಲಿ ನಿಯೋಜಿಸಲು ವಾಹನ ಮತ್ತು ಚಾಲಕರ ಸಂಖ್ಯೆಯ ವಿವರವನ್ನು ಸಿದ್ಧಪಡಿಸಿ ಇಟ್ಟುಕೊಳ್ಳತಕ್ಕದ್ದು;
14. ತಮ್ಮ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಅತಿಥಿ ಗೃಹ, ಕಛೇರಿ, ಶಾಲೆಗಳು, ಕಾಲೇಜುಗಳಲ್ಲಿ ಸ್ನಾನದ ಕೋಣೆಗಳೊಂದಿಗೆ ಪ್ರತ್ಯೇಕ ಕೊಠಡಿಗಳಿರುವ ಕಟ್ಟಡಗಳ ವಿವರಗಳನ್ನು ಸಿದ್ಧಪಡಿಸಿ ಇಟ್ಟುಕೊಳ್ಳತಕ್ಕದ್ದು ಮತ್ತು ಅತ್ಯಂತ ತುರ್ತು ಸಂದರ್ಭದಲ್ಲಿ ಆ ಕೊಠಡಿಯನ್ನು ತಲುಪಲು ಹಾಗೂ ಅದರ ಬೀಗದ ಕೈಗಳನ್ನು ನೀಡಲು ವ್ಯಕ್ತಿಯನ್ನು ಗುರುತಿಸತಕ್ಕದ್ದು.
15. ವೈರಾಣು ತಡೆಗಟ್ಟಲು ಅನುಸರಿಸಬೇಕಾದ ಕ್ರಮ ಮತ್ತು ಅನುಸರಿಸಲು ಯೋಗ್ಯವಲ್ಲದ ಕ್ರಮಗಳ ಬಗ್ಗೆ ಹಾಗೂ ಇತರ ಜಾಗೃತಿ ಕ್ರಮಗಳನ್ನು ತಿಳಿಸುವ ವಸ್ತುಗಳನ್ನು ಇರಿಸಿರುವ ಡ್ರಾಪ್ ಬಾಕ್ಸ್ ವಿಳಾಸವನ್ನು ನಮೂದಿಸತಕ್ಕದ್ದು;
16. ಹೆಸರು, ದೂರವಾಣಿ ಸಂಖ್ಯೆ: ಇ–ಮೇಲ್ ಐಡಿ/ವಾಟ್ಸ್‌ಅಪ್ ಸಂಪರ್ಕ ಸಹಿತ 2ನೇ ಮತ್ತು 3ನೇ ಹಂತದ ಸಿಬ್ಬಂದಿಗಳ ಪಟ್ಟಿಯನ್ನು ಸಿದ್ಧಪಡಿಸಿ ಅವರಿಗೆ ವೈರಾಣು ತಡೆಗಟ್ಟುವ ಸೇವೆಯ ಪ್ರಮುಖ ಜವಾಬ್ದಾರಿಗಳನ್ನು ವಹಿಸತಕ್ಕದ್ದು;

(ಎನ್. ವೀರಬ್ರಹ್ಮಚಾರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು–1).

21/03/2020

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಮುಖ್ಯಮಂತ್ರಿಯವರ ಸಚಿವಾಲಯ, ವಿಧಾನ ಸೌಧ, ಬೆಂಗಳೂರು
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
5. ಕಾರ್ಯದರ್ಶಿ, ಉಪಮುಖ್ಯಮಂತ್ರಿ (ಉನ್ನತ ಶಿಕ್ಷಣ, ಐಟಿ & ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ) ಕಛೇರಿ, ವಿಕಾಸ ಸೌಧ, ಬೆಂಗಳೂರು

...4

6. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
7. ಆಡಳಿತಾಧಿಕಾರಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಮಲ್ಲೇಶ್ವರಂ, ಬೆಂಗಳೂರು
8. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
9. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು.
10. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು – 560 056.
11. ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು – 570 005.
12. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ – 580 003..
13. ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ, ಶಿವಮೊಗ್ಗ ಜಿಲ್ಲೆ – 577 451.
14. ಕುಲಸಚಿವರು, ಗುಲ್ಬರ್ಗ ವಿಶ್ವವಿದ್ಯಾಲಯ, ಕಲಬುರಗಿ – 585 106
15. ಕುಲಸಚಿವರು, ಮಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು – 560 056.
16. ಕುಲಸಚಿವರು, ತುಮಕೂರು ವಿಶ್ವವಿದ್ಯಾಲಯ, ತುಮಕೂರು – 572 101.
17. ಕುಲಸಚಿವರು, ಕನ್ನಡ ವಿಶ್ವವಿದ್ಯಾಲಯ, ಹಂಪಿ – 583 276.
18. ಕುಲಸಚಿವರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು – 570 006.
19. ಕುಲಸಚಿವರು, ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ – 586 101.
20. ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ..
21. ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ.
22. ಕುಲಸಚಿವರು, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ.
23. ಕುಲಸಚಿವರು, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ..
24. ಕುಲಸಚಿವರು, ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು – 560 018.
25. ಕುಲಸಚಿವರು, ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು.
26. ಕುಲಸಚಿವರು, ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ, ಶಿಗ್ಗಾವಿ ತಾಲ್ಲೂಕು, ಹಾವೇರಿ ಜಿಲ್ಲೆ. ವಿಶ್ವವಿದ್ಯಾಲಯ, ಬೆಂಗಳೂರು – 560 056.
27. ಕುಲಸಚಿವರು, ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು.
28. ಕುಲಸಚಿವರು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ತಮಕಾ, ಕೋಲಾರ ಜಿಲ್ಲೆ.